# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ | : | 663(691) |
| ಸದಸ್ಯರ ಹೆಸರು | : | ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | : | 18.08.2025 |
| ಉತ್ತರಿಸಬೇಕಾದ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆ ಶೈಕ್ಷಣಿಕವಾಗಿ ಹಿಂದೆ ಉಳಿದಿದ್ದು, ಸತತವಾಗಿ ಫಲಿತಾಂಶವನ್ನು ಕುಸಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ |
| ಆ) | ಫಲಿತಾಂಶ ಹೆಚ್ಚಿಸಲು ಸರ್ಕಾರ ಕೈಗೊಂಡ ಯೋಜನೆಗಳು ಮತ್ತು ಕಾರ್ಯಕ್ರಮಗಳು ಯಾವುವು (ವಿವರ ನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ:ಇಪಿ 215 ಎಸ್.ಎಲ್.ಬಿ 2025 ದಿನಾಂಕ:01.07.2025ರಂದು ಹೊರಡಿಸಿರುವ ಈ ಕೆಳಗಿನ ತಃಖ್ತೆ ಕಾಣಿಸಲಾದ 29 ಅಂಶಗಳ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿ ಫಲಿತಾಂಶ ಹೆಚ್ಚಿಸಲು ಕ್ರಮಕೈಗೊಳಲಾಗಿದೆ.<br>1. ಡಿಸೆಂಬರ್-2025 ರ ಅಂತ್ಯದೊಳಗೆ ಪಠ್ಯಕ್ರಮ ಪೂರ್ಣಗೊಳಿಸುವಿಕೆ.<br>2. ಶಾಲೆಯಲ್ಲಿಯೇ ಪರಿಹಾರ ಬೋಧನೆ.<br>3. ಶಾಲೆಯಲ್ಲಿಯೇ ವಿಶೇಷ ತರಗತಿಗಳು.<br>4. ಶಾಲೆಯಲ್ಲಿ ಬೆಳಗಿನ ಪ್ರಾರ್ಥನಾ ಅವಧಿ ಚಟುವಟಿಕೆ<br>5. ಶಾಲೆಯಲ್ಲಿಯೇ ಪ್ರತಿ ಪಾಠದ ಕಲಿಕೆಯ ಮೌಲ್ಯಾಂಕನ ಮತ್ತು ವಿದ್ಯಾರ್ಥಿವಾರು ಕಲಿಕೆ ಆಧಾರಿತ ಟ್ರ್ಯಾಕಿಂಗ್ ವ್ಯವಸ್ಥೆ<br>6. ಶಾಲೆಗಳಲ್ಲಿ ದ್ವೈಮಾಸಿಕ ಪೋಷಕ-ಶಿಕ್ಷಕರ ಸಭೆಗಳು<br>7. .Early Warning System ಶಾಲೆಗೆ ವಿದ್ಯಾರ್ಥಿಗಳು ಗೈರು ಹಾಜರಾಗದಂತೆ ವಹಿಸಬೇಕಾದ ಮುನ್ನೆಚ್ಚರಿಕಾ ಕ್ರಮಗಳು.<br>8. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಕರೆತರುವುದು.<br>9. ಶಾಲೆಗಳಲ್ಲಿ Buddy Pairing ಮೂಲಕ ನಿಧಾನಗತಿ ಕಲಿಕಾ ವಿದ್ಯಾರ್ಥಿಗಳ ಕಲಿಕೆ ಬಲವರ್ಧನೆ.<br>10. ಹತ್ತನೇ ತರಗತಿಯ ವಿಷಯವಾರು ಘಟಕವಾರು ಪ್ರಶ್ನೆಕೋರಿ.<br>11. ವಿದ್ಯಾರ್ಥಿಗಳ ನಿರಂತರ ಮೌಲ್ಯಮಾಪನ.<br>12. Wakeup Call.<br>13. ಕ್ರೀಡಾ ಅವಧಿ.<br>14. ಮೊಬೈಲ್ ಫೋನ್ ಮತ್ತು ಸಾಮಾಜಿಕ |

| | | |
|---|---|---|
| | | ಜಾಲತಾಣಗಳ ಬಳಕೆಯ ಗೀಳನ್ನು ತಪ್ಪಿಸುವುದು.<br>15. ಶಾಲೆಯಲ್ಲಿಯೇ ಆರೋಗ್ಯ ತಪಾಸಣೆ<br>16. ಶಾಲೆಯಲ್ಲಿಯೇ ಶೈಕ್ಷಣಿಕ ವೃತ್ತಿ ಮಾರ್ಗದರ್ಶನ ಕಾರ್ಯಾಗಾರಗಳ ಆರೋಜನೆ.<br>17. ಕಡಿಮೆ ಸಾಧನೆಯ ಶಾಲೆಗಳ ಗುರುತಿಸುವಿಕೆ.<br>18. ನಿರಂತರ ಕಣ್ಗಾವಲಿಸಬೇಕಾದ ಶಾಲೆಗಳು(Watchlist Schools).<br>19. ಶಿಕ್ಷಣ ಇಲಖೆಯ ಅಧಿಕಾರಿಗಳಿಗೆ ಶಾಲಾ ದತ್ತು ಕಾರ್ಯಕ್ರಮ.<br>20. ಶುಕ್ರವಾರ ಶಾಲಾ ಭೇಟಿ(Friday School)<br>21. ಶಾಲೆಯಲ್ಲಿಯೇ ಹತ್ತನೇ ತರಗತಿಯ ವಿದ್ಯಾರ್ಥಿಗಳ ಉತ್ತಮ ಕಲಿಕೆಗಾಗಿ ಮಾಹೆವಾರು ಪ್ರಗತಿ ಪರಿಶೀಲನಾ ಸಭೆಗಳು.<br>22. ಶಿಕ್ಷಕರಿಗೆ ಪುನಶ್ಚೇತನ ತರಬೇತಿ ಆಯೋಜನೆ.<br>23. ಎಸ್.ಎಸ್.ಎಲ್.ಸಿ ಪರೀಕ್ಷೆ-1 ಮತ್ತು ಪರೀಕ್ಷೆ-2 ವೇಳಾಪಟ್ಟಿಯನ್ನು ಮುಂಚಿತವಾಗಿ ಪ್ರಕಟಿಸುವ ಕುರಿತು.<br>24. ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಪ್ರಕಟಿಸುವ ಕುರಿತು.<br>25. ವಿಷಯವಾರು ನೀಲಿ ನಕ್ಷೆ ಪ್ರಕಟಿಸುವ ಕುರಿತು.<br>26. ಪೂರ್ವಸಿದ್ಧತಾ ಪರೀಕ್ಷಗಳನ್ನು ನಡೆಸುವ ಬಗ್ಗೆ<br>27. ಮೇಲುಸ್ತುವಾರಿ ಅಧಿಕಾರಿಗಳ ಜವಬ್ದಾರಿ.<br>28. ಜಿಲ್ಲಾ ಹಂತದಲ್ಲಿ ಪ್ರಗತಿ ಪರಿಶೀಲನಾ ಸಭೆ.<br>29. ಅನುತ್ತೀರ್ಣ ವಿದ್ಯಾರ್ಥಿಗಳ ಮರು ದಾಖಲಾತಿ. |
| ಇ) | ಕಲಬುರಗಿ ಜಿಲ್ಲೆಯಲ್ಲಿ ನೂತನವಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿ ಪ್ರಾರಂಭಿಸದಿರಲು ಕಾರಣವೇನು: | ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸುವ ಕುರಿತು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಕೆಲವು ಹುದ್ದೆಗಳನ್ನು ಮರು ವಿನ್ಯಾಸಗೊಳಿಸುವುದರ ಜೊತೆಗೆ ಸುಮಾರು 1200 ಕ್ಕೂ ಹೆಚ್ಚು ಹುದ್ದೆಗಳನ್ನು ಹೊಸದಾಗಿ ಸೃಜಿಸಲು ಹಾಗೂ ಸ್ವಂತ ಕಟ್ಟಡ ಲಭ್ಯವಿಲ್ಲದೇ ಇರುವ ಸ್ಥಳಗಳಲ್ಲಿ ಬಾಡಿಗೆ ಕಟ್ಟಡಗಳನ್ನು ಪಡೆಯಲು ಹೊಸ ಕಛೇರಿಗಳಲ್ಲಿ ಅಧಿಕಾರಿ/ಸಿಬ್ಬಂದಿಗಳ ವೇತನ ಭರಿಸಲು ಅಗತ್ಯ ಮೂಲಭೂತ ಸೌಕರ್ಯ ಒದಗಿಸಲು ಹಾಗೂ ಕಛೇರಿ ನಿರ್ವಹಣೆಗಾಗಿ ಸುಮಾರು ರೂ.1069.24 ಲಕ್ಷಗಳು ಅಗತ್ಯವಿರುವುದಾಗಿ ಪ್ರಸ್ತಾಪಿಸಲಾಗಿರುತ್ತದೆ. ಅದರಂತೆ, ಈ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಲಾಗಿತ್ತು. |
| ಈ) | ಸದರಿ ಹೊಸ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಪ್ರಾರಂಭಿಸುವುದರಿಂದ ಕಾರ್ಯ ವ್ಯಾಪ್ತಿ ಕಡಿಮೆಯಾಗಿ ಅದರಿಂದ ವೀಕ್ಷಣೆ ಮತ್ತು ಪರಿಶೀಲನೆ ಕಾರ್ಯ ಸುಗಮವಾಗಿ ಆ ಮುಖಾಂತವಾಗಿ ಫಲಿತಾಂಶ ಹೆಚ್ಚಳಕ್ಕೆ ಕೈಗೊಂಡ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಜಾರಿಗೊಳಿಸುವುದು ಸುಲಭವಾಗುವುದಿಲ್ಲವೇ: | |
| ಉ) | ಕಲಬುರಗಿ ಜಿಲ್ಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಸ್ಥಾಪಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು; | |
| ಊ) | ಕಲ್ಯಾಣ ಕರ್ನಾಟಕದಲ್ಲಿ ನೂತನವಾಗಿ ತಾಲ್ಲೂಕುಗಳು ರಚನೆಯಾಗಿದ್ದು, ಆ | |

| | | |
|---|---|---|
| | ತಾಲ್ಲೂಕಿನಲ್ಲಿ ಎಷ್ಟು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಸ್ಥಾಪಿಸಲು ಸರ್ಕಾರಿ ಚಿಂತಿಸಿದೆ? | ಹೊಸದಾಗಿ ರಚನೆಯಾದ ಕಂದಾಯ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು 2 ವರ್ಷಗಳ ಕಾಲ ಮುಂದೂಡುವಂತೆ ಆರ್ಥಿಕ ಇಲಾಖೆಯು ದಿನಾಂಕ:27.05.2025 ರಂದು ಅಭಿಪ್ರಾಯ ನೀಡಿ ಪ್ರಸ್ತಾವನೆ ಹಿಂದಿರುಗಿಸಿರುತ್ತದೆ.<br><br>ಹೊಸದಾಗಿ ರಚನೆಯಾದ ಕಂದಾಯ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾದಿಕಾರಿ ಕಛೇರಿಗಳ ಪ್ರಾರಂಭಿಸುವ ಪ್ರಸ್ತಾವನೆಗಳು ಸ್ವೀಕೃತವಾಗುತ್ತಿರುವ ಹಿನ್ನೆಲೆಯಲ್ಲಿ ಮತ್ತೊಮ್ಮೆ ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿದೆ. |

**ಸಂಖ್ಯೆ ಇಪಿ 150 ಪಿಟಿಐ 2025**

(ಮಧುಬಂಗಾರಪ್ಪ ಎಸ್ )
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು